CW-13
PW-10

**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು.**

ಸ್ಪೇಷಲ್ .ಕೇಸ್(ಎಸ್.ಸಿ./ಎಸ್.ಟಿ.) ಸಂಖ್ಯೆ 488/2024

ದಿ. 08-07-2026

(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು )

ಚಾಸಾ-13
ಫ್ರಾಸಾ-10

| | |
|---|---|
| ಸಾಕ್ಷಿದಾರರ ಹೆಸರು | ಶಾಹಲಂ |
| ತಂದೆಯ ಹೆಸರು | ಬಂಗಾರಪ್ಪ |
| ವಯಸ್ಸು | 61 ವರ್ಷ |
| ಉದ್ಯೋಗ | ನಿವೃತ್ತ ಎ.ಎಸ್.ಐ. |
| ವಾಸಸ್ಥಳ | ದೇವದುರ್ಗ |

**ಮುಖ್ಯ ವಿಚಾರಣೆಃ ಸಾರ್ವಜನಿಕ ಅಭಿಯೋಜಕರಿಂದಃ-**

1. ನಾನು ದಿಃ 01-06-2021 ರಿಂದ 30-06-2026 ರವರೆಗೆ ಗಬ್ಬೂರು ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 25-07-2024 ರಂದು, ಸಾಯಂಕಾಲ 6-30 ರ ಸಮಯದಲ್ಲಿ ನಾನು ಠಾಣಾಧಿಕಾರಿಯಾಗಿದ್ದಾಗ ಚಾಸಾ-1 ತಮ್ಮಣ್ಣ ಠಾಣೆಗೆ ಹಾಜರಾಗಿ ಲಿಖಿತ ದೂರೊಂದನ್ನು ನೀಡಿದ್ದು, ಸದರಿ ದೂರನ್ನು ಪರಿಶೀಲಿಸಿ ಠಾಣಾ ಮೊಕದ್ದಮೆ ಸಂಖ್ಯೆ 99/2024 ರಂತೆ ಈ ಪ್ರಕರಣವನ್ನು ದಾಖಲಿಸಿ ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಗಳಿಗೆ ಪ್ರಥಮ ವರ್ತಮಾನ

CW-13
PW-10

ವರದಿಯನ್ನು ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ಪ್ರಸ್ತುತ ದೂರನ್ನು ನೋಡಿ ಗುರುತಿಸಿದ್ದು, ಸದರಿ ದೂರು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ತಮ್ಮ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸುತ್ತಾರೆ, ಮತ್ತು ಪ್ರಥಮ ವರ್ತಮಾನ ವರದಿಯನ್ನು ನಿಪಿ-9 ಎಂದು ಮತ್ತು ತಮ್ಮ ಸಹಿಯನ್ನು ನಿಪಿ-9(ಎ) ಎಂದು ಗುರುತಿಸುತ್ತಾರೆ. ತದನಂತರ ಮುಂದಿನ ತನಿಖೆಗೆಂದು ಪ್ರಕರಣದ ಕಡತವನ್ನು ಚಾಸಾ-14 ರವರಿಗೆ ವರ್ಗಾಯಿಸಿರುತ್ತೇನೆ.

**ಪಾಟೀ ಸವಾಲು ಶ್ರೀ ಎಸ್.ಜಿ.ಕೆ. ವಕೀಲರಿಂದ ಆರೋಪಿತರ ಪರಃ**

3. ಈ ಪ್ರಕರಣದ ದಾಖಲಾಗಿರುವುದು ನ್ಯಾಯ ಬೆಲೆಯ ಅಂಗಡಿಯ ವಿಷಯವಾಗಿ ಎನ್ನುವುದು ಸರಿ. ನ್ಯಾಯ ಬೆಲೆಯ ಅಂಗಡಿಯನ್ನು ಸರಿಯಾಗಿ ನಡೆಸುತ್ತಿಲ್ಲ ಎಂದು ಆರೋಪಿತರು ಮತ್ತು ಗ್ರಾಮಸ್ಥರು ಆಹಾರ ಇಲಾಖೆಗೆ ದೂರು ನೀಡಿದ್ದರು ಎಂದರೆ ಸಾಕ್ಷಿ, ಈ ಬಗ್ಗೆ ನನಗೆ ಗೊತ್ತಿಲ್ಲ ಎನ್ನುತ್ತಾರೆ. ಪ್ರಸ್ತುತ ದೂರುದಾರರ ನ್ಯಾಯ ಬೆಲೆ ಅಂಗಡಿಯನ್ನು ನಡೆಸುವ ಪರವಾನಿಗೆಯನ್ನು ರದ್ದು ಮಾಡಲಾಗಿದೆ ಎಂದರೆ ಸಾಕ್ಷಿ ಗೊತ್ತಿಲ್ಲ ಎನ್ನುತ್ತಾರೆ. ಪಿರ್ಯಾದಿದಾರರು ಮತ್ತು ಅವರ ತಂದೆಯ ಮಾತನ್ನು ಕೇಳಿಕೊಂಡು ಈ ಸುಳ್ಳು ಪ್ರಕರಣದ ದಾಖಲು ಮಾಡಿದ್ದೇನೆಂದರೆ ಸರಿಯಲ್ಲ. ಈ ರೀತಿಯ ಒಂದು ಸುಳ್ಳು ಪ್ರಕರಣದ ದಾಖಲು ಮಾಡಿದರೇ ಮುಂದೆ ಪಿರ್ಯಾದಿದಾರರ ತಂಟೆಗೆ ಯಾರು ಬರುವುದಿಲ್ಲ ಎನ್ನುವ

CW-13
PW-10

ಉದ್ದೇಶದಿಂದಲೇ ಈ ದೂರನ್ನು ನೀಡಲಾಗಿದೆ ಎಂದರೆ ಸಾಕ್ಷಿ ಗೊತ್ತಿಲ್ಲ ಎನ್ನುತ್ತಾರೆ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.

(ಮಾಲ ಎನ್.ಡಿ.)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ರಾಯಚೂರು.